# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 2414 |
| ಮಾನ್ಯ ಸದಸ್ಯರ ಹೆಸರು | ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 27.03.2026 |
| ಉತ್ತರಿಸುವ ಸಚಿವರು | ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಸಿಂಧನೂರು ತಾಲ್ಲೂಕಿನಲ್ಲಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿದ್ಯಾರ್ಥಿ ನಿಲಯಗಳೆಷ್ಟು; | ಸಿಂಧನೂರು ತಾಲ್ಲೂಕಿನಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ 4 ಮೆಟ್ರಿಕ್ ಪೂರ್ವ ಹಾಗೂ 6 ಮೆಟ್ರಿಕ್ ನಂತರದ ಹೀಗೆ ಒಟ್ಟು 10 ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿದ್ದು, ಈ ವಿದ್ಯಾರ್ಥಿನಿಲಯಗಳಲ್ಲಿ ಕ್ರಮವಾಗಿ 210 ಹಾಗೂ 793 ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶವನ್ನು ಕಲ್ಪಿಸಲಾಗಿರುತ್ತದೆ. |
| ಆ) | ಸದರಿ ವಿದ್ಯಾರ್ಥಿನಿಲಯಗಳಿಗೆ ಸರ್ಕಾರದಿಂದ ಮಂಜೂರಾಗಿರುವ ವಿದ್ಯಾರ್ಥಿಗಳ ಸಾಮರ್ಥ್ಯಕ್ಕಿಂತ ಹೆಚ್ಚು ವಿದ್ಯಾರ್ಥಿಗಳು ಪ್ರವೇಶಾತಿ ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | 2025-26ನೇ ಶೈಕ್ಷಣಿಕ ಸಾಲಿನಲ್ಲಿ ಸಿಂಧನೂರು ತಾಲ್ಲೂಕಿನ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳು 210 ಮಂಜೂರಾತಿ ಸಂಖ್ಯೆ ಹೊಂದಿರುತ್ತವೆ. 120 ನವೀಕರಣ ವಿದ್ಯಾರ್ಥಿಗಳಿದ್ದು, 90 ಖಾಲಿ ಸ್ಥಾನಗಳು ಇರುತ್ತವೆ. ಖಾಲಿ ಸ್ಥಾನಗಳಿಗನುಗುಣವಾಗಿ 222 ಅರ್ಜಿಗಳು ಸ್ವೀಕೃತವಾಗಿದ್ದು, ಈ ಪೈಕಿ 90 ವಿದ್ಯಾರ್ಥಿಗಳಿಗೆ ಪ್ರವೇಶಾತಿಯನ್ನು ಕಲ್ಪಿಸಲಾಗಿರುತ್ತದೆ. 132 ಅರ್ಜಿಗಳಿಗೆ ಪ್ರವೇಶಾತಿಯನ್ನು ಕಲ್ಪಿಸಲು ಸಾಧ್ಯವಾಗಿರುವುದಿಲ್ಲ.<br><br>ಅದರಂತೆ, ಸಿಂಧನೂರು ತಾಲ್ಲೂಕಿನಲ್ಲಿ 6 ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳು ಕಾರ್ಯ ನಿರ್ವಹಿಸುತ್ತಿದ್ದು, ಈ ವಿದ್ಯಾರ್ಥಿ ನಿಲಯಗಳು ಒಟ್ಟು 793 ಮಂಜೂರಾತಿ ಸಂಖ್ಯೆ ಹೊಂದಿರುತ್ತವೆ. ಈ ಪೈಕಿ 382 ನವೀಕರಣ ವಿದ್ಯಾರ್ಥಿಗಳಿದ್ದು, 411 ಖಾಲಿ ಸ್ಥಾನಗಳು ಇರುತ್ತವೆ. ಖಾಲಿ ಸ್ಥಾನಗಳಿಗೆ ಅನುಗುಣವಾಗಿ 2001 ಅರ್ಜಿಗಳು ಸ್ವೀಕೃತವಾಗಿರುತ್ತವೆ. ಈ ಪೈಕಿ 411 ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶವನ್ನು ಕಲ್ಪಿಸಲಾಗಿದ್ದು, 1590 ಅರ್ಜಿಗಳು ಬಾಕಿ ಉಳಿದಿರುತ್ತವೆ.<br><br>ಮುಂದುವರೆದು, ರಾಯಚೂರು ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿನ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿ ಉಳಿಕೆಯಾದ ಖಾಲಿ ಸ್ಥಾನಗಳಲ್ಲಿ 75 ಸ್ಥಾನಗಳನ್ನು ಅಗತ್ಯ ಮೂಲಭೂತ ಸೌಕರ್ಯ ಮತ್ತು ಸ್ಥಳಾವಕಾಶ ಲಭ್ಯವಿರುವ ಸಿಂಧನೂರು ತಾಲ್ಲೂಕಿನ |
| ಇ) | ಮಂಜೂರಾತಿ ಸಾಮರ್ಥ್ಯಕ್ಕಿಂತ ಹೆಚ್ಚಿನ ಸಂಖ್ಯೆಯ ವಿದ್ಯಾರ್ಥಿಗಳು ದಾಖಲಾದಲ್ಲಿ ಸಮರ್ಪಕವಾಗಿ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಕಷ್ಟ ಸಾಧ್ಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | |

| | | |
|---|---|---|
| | | ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಿಗೆ ತಾತ್ಕಾಲಿಕ ಆಂತರಿಕ ವರ್ಗಾವಣೆ ಮಾಡಿಕೊಂಡು ಪ್ರವೇಶಾತಿಯನ್ನು ಕಲ್ಪಿಸಲಾಗಿರುತ್ತದೆ. ತಾತ್ಕಾಲಿಕ ಆಂತರಿಕ ವರ್ಗಾವಣೆ ಮಾಡಿಕೊಂಡು ಬಾಕಿಯಿದ್ದ 1590 ಅರ್ಜಿಗಳಲ್ಲಿ ಒಟ್ಟು 75 ವಿದ್ಯಾರ್ಥಿಗಳಿಗೆ ಪ್ರವೇಶಾತಿಯನ್ನು ಕಲ್ಪಿಸಲಾಗಿರುತ್ತದೆ. ಉಳಿಕೆ 1515 ಅರ್ಜಿಗಳಿಗೆ ಪ್ರವೇಶಾತಿಯನ್ನು ಕಲ್ಪಿಸಲು ಸಾಧ್ಯವಾಗಿರುವುದಿಲ್ಲ. |
| **ಈ)** | ಬಂದಿದ್ದಲ್ಲಿ, ಈ ಸಂಬಂಧ ಜಿಲ್ಲಾ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು. ರಾಯಚೂರು ಇವರಿಂದ ವರದಿ ಪಡೆದು ಪ್ರವೇಶಾತಿ ಪಡೆಯುವ ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಅಗತ್ಯವಿರುವ ಹೆಚ್ಚುವರಿ ವಿದ್ಯಾರ್ಥಿ ನಿಲಯಗಳನ್ನು ಮಂಜೂರು ಮಾಡುವ ಸಂಬಂಧ ಸರ್ಕಾರದ ನಿಲುವೇನು; | 2024-25ನೇ ಸಾಲಿನಲ್ಲಿ ಸಿಂಧನೂರು ತಾಲ್ಲೂಕಿನಲ್ಲಿ 100 ಸಂಖ್ಯಾಬಲದ ಒಂದು ಮೆಟ್ರಿಕ್ ನಂತರದ ಬಾಲಕರ ಹಾಗೂ ಬಾಲಕಿಯರ ವಿದ್ಯಾರ್ಥಿನಿಲಯಗಳನ್ನು ಮಂಜೂರು ಮಾಡಿ ಪ್ರಾರಂಭಿಸಲಾಗಿದೆ.<br><br>ಪ್ರಸಕ್ತ ಸಾಲಿಗೆ ಹೊಸದಾಗಿ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳನ್ನು ಮಂಜೂರು ಮಾಡುವಂತೆ ಪ್ರಸ್ತಾವನೆ ಸ್ವೀಕೃತವಾಗಿರುವುದಿಲ್ಲ. |
| **ಉ)** | ಯಾವ ಕಾಲಮಿತಿಯೊಳಗೆ ಸಿಂಧನೂರು ತಾಲ್ಲೂಕಿಗೆ ಅಗತ್ಯವಿರುವ ಹೆಚ್ಚುವರಿ ವಿದ್ಯಾರ್ಥಿ ನಿಲಯಗಳನ್ನು ನಿರ್ಮಿಸಿ, ವಿದ್ಯಾರ್ಥಿಗಳಿಗೆ ಪ್ರವೇಶಾತಿ ಕಲ್ಪಿಸಲಾಗುವುದು? | |

ಸಂಖ್ಯೆ:ಹಿಂವಕ **347** ಬಿಎಂಎಸ್ **2026**

**(ಶಿವರಾಜ ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು